ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ-2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ-೨)ನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(2) ವಿಧೇಯಕ ಮಂಡನೆ

ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕ 2000.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, ೨೦೦೦ರ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕವನ್ನು ಮಂಡಿಸಲು ಅನುಮಿತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು.

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 2

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು) :— ಮಾನ್ಯ ಅಧ್ಯಕ್ಷರೆ, ನಾವುಗಳು ಮಾನ್ಯ ಮುಖ್ಯಮಂತ್ರಿಗಳ ಜೊತೆ ಏನು ಮಾತನಾಡಿದ್ದೇವೆಂದು ಹೇಳುತ್ತಿದ್ದೇನೆ, ಬೆಳಿಗ್ಗೆ ನಾವುಗಳು ಮತ್ತು ಪ್ರತಿಪಕ್ಷದ ನಾಯಕರು ಮತ್ತು ಪ್ರಮುಖರೆಲ್ಲರೂ ಸೇರಿ ಇದರ ಬಗ್ಗೆ ಮೊದಲು ಚರ್ಚೆ ಮಾಡಿದ ನಂತರ ಅದನ್ನು ಮಂಡನೆ ಮಾಡಲಿ ಎಂದು ಹೇಳಿದ್ದೆವು ಇದರ ಬಗ್ಗೆ ನಾವುಗಳೆಲ್ಲರೂ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ್ದೆವು.

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, ಇದರ ಬಗ್ಗೆ ನಾವು ಮತ್ತು ಅವರುಗಳೆಲ್ಲರೂ ಕೂಡ ಚರ್ಚೆಯನ್ನು ಮಾಡುವವರಿದ್ದೇವೆ. ಆದ್ದರಿಂದ ಇದನ್ನು ಇನ್ನೊಂದು ದಿವಸ ತೆಗೆದುಕೊಳ್ಳಬೇಕೆಂದು ಕೋರುತ್ತೇನೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕ 2000ನ್ನು ಪರ್ಯಾಲೋಚಿಸುವ ಬಗ್ಗೆ ನಾಳೇ ದಿವಸ ತೆಗೆದುಕೊಳ್ಳಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಆಯಿತು.

(3) ಪರ್ಯಾಲೋಚನಾ ಪ್ರಸ್ತಾವ

ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ, 2000.

ಪರ್ಯಾಲೋಚನ ಪ್ರಸ್ತಾವ

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :— ಮಾನ್ಯ ಅಧ್ಯಕ್ಷರೆ, 2000ನೇ ಸಾಲಿನ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು